# ಕರ್ನಾಟಕ ಸರ್ಕಾರ

**ಸಂಖ್ಯೆ:** MWD 55 MDS 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:17.11.2021.

## ಸುತ್ತೋಲೆ

**ವಿಷಯ:-** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಸ್ಥ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಮಹಿಳಾ ಸುರಕ್ಷತಾ ದೃಷ್ಟಿಯಿಂದ ಮಹಿಳಾ ವಾರ್ಡನ್‌ಗಳನ್ನು ನಿಯೋಜಿಸುವ ಬಗ್ಗೆ.

ರಾಜ್ಯದಲ್ಲಿ ಶಾಲಾ ಕಾಲೇಜು ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮೇಲೆ ಹಾಗೂ ಮಹಿಳಾ ಸಿಬ್ಬಂಧಿಗಳ ಮೇಲೆ ಲೈಂಗಿಕ ಕಿರುಕುಳ/ಅತ್ಯಾಚಾರ ಹಾಗೂ ದೈಹಿಕ ಹಿಂಸೆ ಸೇರಿದಂತೆ ಹಲವಾರು ಪ್ರಕರಣಗಳು ಗಣನೀಯವಾಗಿ ನಡೆಯುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ ಹಾಗೂ ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗುತ್ತಿರುವುದರಿಂದ, ಸರ್ಕಾರವು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು ಇದನ್ನು ತಡೆಗಟ್ಟುವುದು ಸರ್ಕಾರದ/ಇಲಾಖೆಯ ಆದ್ಯ ಕರ್ತವ್ಯವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಈ ರೀತಿಯ ದುರ್ಘಟನೆಗಳನ್ನು ಸರ್ಕಾರವು ತುಂಬಾ ಗಂಭೀರವಾಗಿ ಪರಿಗಣಿಸಿದ್ದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಉದ್ಯೋಗಸ್ಥ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ಮಹಿಳೆಯರು ಮತ್ತು ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯ ತಡೆಗಟ್ಟಲು/ಹತ್ತಿಕ್ಕಲು ಕೆಳಗೆ ತಿಳಿಸಿರುವ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಸೂಕ್ತಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

1. ರಾಜ್ಯದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರತ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ಮಹಿಳೆಯರು ಮತ್ತು ವಿದ್ಯಾರ್ಥಿನಿಯರ ಸುರಕ್ಷತಾ ದೃಷ್ಟಿಯಿಂದ ಸದರಿ ವಿದ್ಯಾರ್ಥಿನಿಲಯಗಳಿಗೆ ಮಹಿಳಾ ವಾರ್ಡನ್‌ಗಳನ್ನೇ (Women Warden) ನಿಯೋಜಿಸುವುದು.

2. ಒಂದು ವೇಳೆ ಇಲಾಖೆಯಲ್ಲಿ ಮಹಿಳಾ ವಾರ್ಡನ್‌ಗಳು ಲಭ್ಯವಿಲ್ಲದಿದ್ದಲ್ಲಿ ಮಹಿಳಾ ಶಿಕ್ಷಕರನ್ನು ವಾರ್ಡನ್ ಹುದ್ದೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸುವುದು.

3. ಸದರಿ ವಿದ್ಯಾರ್ಥಿನಿಲಯಗಳಿಗೆ ಭದ್ರತಾ ಸಿಬ್ಬಂದಿಯನ್ನೂ ಸಹ ಮಹಿಳಾ ಸಿಬ್ಬಂದಿಯನ್ನೇ ನಿಯೋಜಿಸುವಂತೆ ಹಾಗೂ ಯಾವುದೇ ಕಾರಣದಿಂದ ಪುರುಷ ವಾರ್ಡನ್ ಅಥವಾ ಪುರುಷ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬಾರದೆಂದು ಈ ಮೂಲಕ ಸೂಚಿಸಲಾಗಿದೆ.